All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

20.02.2025 6.40 P.M.

*************

ಮುಖ್ಯಾಂಶಗಳು

- ಸರ್ಕಾರಿ ನೌಕರರಿಗೆ ಆರೋಗ್ಯ ಸಂಜೀವಿನಿ ಯೋಜನೆ ಜಾರಿ - ಮುಖ್ಯಮಂತ್ರಿ ಸಿದ್ದರಾಮಯ್ಯ
- ನಮ್ಮ ರಸ್ತೆ-ವಿನ್ಯಾಸ ಕಾಮಗಾರಿ, ಸಂಚಾರ ಪ್ರಯೋಗಾಲಯಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ
- ಎಸ್‌ಸಿಪಿ-ಎಸ್‌ಟಿಪಿ ಯೋಜನೆಯಡಿ ಮೀಸಲಿಟ್ಟ ಹಣ ರಾಜ್ಯ ಸರ್ಕಾರದಿಂದ ದುರ್ಬಳಕೆ - ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪ
- ಇಂದು ರಾಜ್ಯಾದ್ಯಂತ ತ್ರಿಪದಿ ಕವಿ ಸರ್ವಜ್ಞ ಜಯಂತಿ ಆಚರಣೆ

**************

ಬೆಂಗಳೂರಿನ ಅರಮನೆ ಮೈದಾನದಲ್ಲಿಂದು ಏರ್ಪಡಿಸಿದ್ದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಚುನಾಯಿತ ನಿರ್ದೇಶಕರು ಹಾಗೂ ಪದಾಧಿಕಾರಿಗಳ ಸಮಾವೇಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಿದರು.

ಸರ್ಕಾರಿ ನೌಕರರು ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸಬೇಕು ಹಾಗೂ ರಾಜ್ಯ ಸರ್ಕಾರದ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ತಮ್ಮ ಸಂದೇಶದಲ್ಲಿ ಕರೆ ನೀಡಿದರು.

ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಅವಲಂಬಿತರಿಗೆ ನಗದು ರಹಿತ ಚಿಕಿತ್ಸಾ ಸೌಲಭ್ಯ ಒದಗಿಸುವ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಜಾರಿ ಸಂಬಂಧ ಶೀಘ್ರ ಆದೇಶ ಹೊರಡಿಸಲಾಗುವುದು ಎಂದರು.

ನೂತನ ಪಿಂಚಣಿ ಯೋಜನೆ ರದ್ದುಪಡಿಸಿ ಹಳೆಯ ಪಿಂಚಣಿ ಯೋಜನೆ ಜಾರಿಗೊಳಿಸಬೇಕೆಂಬ ಸರ್ಕಾರಿ ನೌಕರರ ಬೇಡಿಕೆ ಬಗ್ಗೆ ಪರಿಶೀಲಿಸಲು ಸಮಿತಿಯೊಂದನ್ನು ರಚಿಸಲಾಗಿದ್ದು, ಸಮಿತಿ ನೀಡುವ ವರದಿಯನ್ನಾಧರಿಸಿ, ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

**************

ಬೆಂಗಳೂರಿನ ರಸ್ತೆಗಳು ಭವಿಷ್ಯದಲ್ಲಿಯೂ ಉತ್ತಮವಾಗಿರಬೇಕು. ಆ ರೀತಿಯಾಗಿ ಯೋಜನೆ ರೂಪಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಇಂದು ಹಮ್ಮಿಕೊಂಡಿದ್ದ 'ನಮ್ಮ ರಸ್ತೆ - ವಿನ್ಯಾಸ ಕಾರ್ಯಾಗಾರ' ಉದ್ಘಾಟನೆ ಮತ್ತು ಸಂಚಾರ ಪ್ರಯೋಗಾಲಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬೆಂಗಳೂರಿನಲ್ಲಿ ಸುಮಾರು ೧ ಸಾವಿರದ ೭೦೦ ಕಿಲೋ ಮೀಟರ್ ವಿಸ್ತೀರ್ಣಕ್ಕೆ ವೈಟ್‌ಟಾಪಿಂಗ್ ಮಾಡಲಾಗುತ್ತಿದ್ದು, ಮುಂದಿನ ೩೦ ವರ್ಷ ಬಾಳಿಕೆ ಬರುತ್ತದೆ. ರಾಜಕಾಲುವೆ ಪಕ್ಕದಲ್ಲಿ ಹೊಸ ರಸ್ತೆಗಳ ನಿರ್ಮಾಣ, ಮೇಲ್ಸೇತುವೆ ಸೇರಿದಂತೆ ಅನೇಕ ನೂತನ ಯೋಜನೆಗಳು ಸರ್ಕಾರದ ಮುಂದಿವೆ ಎಂದು ಅವರು ಹೇಳಿದರು.

**************

ಬೆಂಗಳೂರು ಮೂಲದ ಎಮ್ವಿ ಎನರ್ಜಿ ಕಂಪನಿಯು ರಾಜ್ಯದಲ್ಲಿ ತನ್ನ ಉತ್ಪಾದನಾ ಘಟಕ ಆರಂಭಿಸಲು, ಹಂತ-ಹಂತವಾಗಿ ೧೫ ಸಾವಿರ ಕೋಟಿ ರೂಪಾಯಿ ಹೂಡಲು ತೀರ್ಮಾನಿಸಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ.

ವಿಧಾನಸೌಧದ ತಮ್ಮ ಕಚೇರಿಯಲ್ಲಿಂದು ಎಮ್ವಿ ಎನರ್ಜಿ ಕಂಪನಿಯ ಉನ್ನತ ಮಟ್ಟದ ಪ್ರತಿನಿಧಿಗಳ  ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉನ್ನತ ಗುಣಮಟ್ಟದ ಸೋಲಾರ್ ಫೋಟೋವೋಲ್ಟಾಯಿಕ್ ಕೋಶಗಳು ಮತ್ತು ಮಾಡ್ಯೂಲ್ ಉತ್ಪಾದನೆಗೆ ಹೆಸರಾಗಿರುವ ಎಮ್ವಿ ಎನರ್ಜಿ ಕಂಪನಿಯೊಂದಿಗೆ ಹೂಡಿಕೆ ಸಂಬಂಧ ಇತ್ತೀಚೆಗೆ ನಡೆದ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಒಡಂಬಡಿಕೆ ಮಾಡಿಕೊಳ್ಳಲಾಗಿತ್ತು ಎಂದರು.

ಸಂಸ್ಥೆಯ ಮೊದಲ ಹಂತದಲ್ಲಿ ೫ ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಲಿದ್ದು, ೫ ಗಿಗಾವ್ಯಾಟ್ ಸಾಮರ್ಥ್ಯದ ಉತ್ಪಾದನೆ ಮಾಡಲಿದೆ. ಒಟ್ಟು ಯೋಜನೆಯಿಂದ ೧೦ ಸಾವಿರ ಉದ್ಯೋಗ ಸೃಷ್ಟಿಯಾಗಲಿದೆ ಎಂದು ಸಚಿವ ಎಂ.ಬಿ.ಪಾಟೀಲ್ ತಿಳಿಸಿದರು.

**************

ಶಾಲಾ ಮಕ್ಕಳ ಪೌಷ್ಟಿಕ ಆಹಾರ ಅಕ್ರಮ ಸಂಗ್ರಹ ಪ್ರಕರಣದಲ್ಲಿ ಕಾಂಗ್ರೆಸ್ ಪ್ರಮುಖರ ಕೈವಾಡವಿದೆ ಎಂಬ ಆರೋಪ ಕೇಳಿಬರುತ್ತಿದೆ. ರಾಜ್ಯ ಸರ್ಕಾರ ಇದುವರೆಗೂ ಪ್ರಮುಖ ಆರೋಪಿಗಳನ್ನು ಬಂಧಿಸಿಲ್ಲ. ಬದಲಿಗೆ ಅಂತಹ ಆರೋಪಿಗಳ ಸಂರಕ್ಷಣೆಯಲ್ಲಿ ತೊಡಗಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ  ಸರಬರಾಜು ಖಾತೆ ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹುಬ್ಬಳ್ಳಿ ನಗರದಲ್ಲಿ ನಡೆದ ಅಂಗನವಾಡಿ ಮಕ್ಕಳ ಪೌಷ್ಟಿಕ ಆಹಾರ ಅಕ್ರಮ ದಾಸ್ತಾನು ಮತ್ತು ಕಳ್ಳ ಸಾಗಣೆ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಕಾಂಗ್ರೆಸ್ ಆಡಳಿತದಲ್ಲಿ ಭ್ರಷ್ಟಾಚಾರಿಗಳು ತುಂಬಿ ತುಳುಕುತ್ತಿದ್ದಾರೆ. ಭ್ರಷ್ಟ ಅಧಿಕಾರಿ, ಸಿಬ್ಬಂದಿಯನ್ನು ಸಮುದ್ರಕ್ಕೆ ಅಲೆ ಎಣಿಸಲು ಕಳಿಸಿದರೂ ಅಲ್ಲಿ ಮೀನುಗಾರರಿಂದ ಎತ್ತುವಳಿ ಶುರು ಮಾಡುವಂಥವರು ಎಂದು ಟೀಕಿಸಿದರು.

**************

ಪರಿಶಿಷ್ಟ ಸಮುದಾಯಗಳ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಗೆ ರೂಪಿಸಲಾಗಿರುವ SಅP-SಖP ಯೋಜನೆಯಡಿ ಮೀಸಲಿಟ್ಟಿರುವ ಹಣವನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ದುರ್ಬಳಕೆ ಮಾಡಿಕೊಂಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ಬೆಂಗಳೂರಿನ ಬಿಜೆಪಿ ರಾಜ್ಯ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ವರ್ಷ ಮೀಸಲಿಟ್ಟಿದ್ದ ಹಣವನ್ನು ತನ್ನ ಖಾತರಿ ಯೋಜನೆಗಳಿಗೆ ಸರ್ಕಾರ ಬಳಸಿಕೊಂಡಿದೆ. ಸರ್ಕಾರದ ಧೋರಣೆ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸಲು ೧೪ ತಂಡಗಳನ್ನು ರಚಿಸಲಾಗಿದ್ದು, ಈ ತಂಡಗಳು ರಾಜ್ಯಾದ್ಯಂತ ಪ್ರವಾಸ ಮಾಡಲಿವೆ ಎಂದು ತಿಳಿಸಿದರು.

ಮೈಸೂರಿನ ಮುಡಾ ಹಗರಣದಲ್ಲಿ ಲೋಕಾಯುಕ್ತ ಪೊಲೀಸರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಕುಟುಂಬ ಸದಸ್ಯರಿಗೆ ಕ್ಲೀನ್ ಚಿಟ್ ನೀಡಿರುವುದು ಅಚ್ಚರಿಯೇನು ಮೂಡಿಸಿಲ್ಲ. ಲೋಕಾಯುಕ್ತರು ನೀಡಿರುವ ಬಿ ರಿಪೋರ್ಟ್ ನಕಲಿ ವರದಿಯಾಗಿದೆ. ಈ ಬಗ್ಗೆ ಹೋರಾಟ ಮಾಡುವ ಕುರಿತು ಪಕ್ಷದ ಮುಖಂಡರೊಂದಿಗೆ ಚರ್ಚಿಸಿ, ತೀರ್ಮಾನ ಕೈಗೊಳ್ಳಲಾಗುವುದು ಎಂದು ಬಿ.ವೈ. ವಿಜಯೇಂದ್ರ ಹೇಳಿದರು.

**************

ಸಮಾಜದ ಅಂಕು-ಡೊಂಕುಗಳನ್ನು, ಮೌಢ್ಯಗಳನ್ನು ನಿರ್ದಾಕ್ಷಿಣ್ಯವಾಗಿ ಟೀಕಿಸಿ, ತನ್ಮೂಲಕ ಸಮಾಜ ತಿದ್ದಲು ಸರ್ವಜ್ಞರು ಪ್ರಯತ್ನಿಸಿದ್ದಾರೆ ಎಂದು ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದ್ದಾರೆ.

ಕವಿ ಸರ್ವಜ್ಞ ಜಯಂತಿ ಸಮಾರಂಭದಲ್ಲಿ ಅವರು ಮಾತನಾಡಿದರು. ಶಿಕ್ಷಕಿ ಗೀತಾ ಭರಮಸಾಗರ ಮಾತನಾಡಿ, ಕರ್ನಾಟಕದ ಭಾಷಾ ಪರಂಪರೆಯಲ್ಲಿ ಸರ್ವಜ್ಞನ ತ್ರಿಪದಿಗಳು ಅತ್ಯಂತ ಮಹತ್ವದ ಪಾತ್ರ ವಹಿಸಿವೆ. ಕನ್ನಡ ಸಾಹಿತ್ಯ ಶ್ರೀಮಂತ ಪರಂಪರೆಗೆ ತ್ರಿಪದಿಗಳ ಕೊಡುಗೆ ಅನನ್ಯ ಎಂದು ಹೇಳಿದರು.

ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ, ಕುಂಬಾರ ಗುಂಡಯ್ಯ ಮಹಾಸಂಸ್ಥಾನ, ಜಿಲ್ಲಾ ಕುಂಬಾರ ಕ್ಷೇಮಾಭಿವೃದ್ಧಿ ಸಂಘ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾ ವತಿಯಿಂದ ಕವಿ ಸರ್ವಜ್ಞ ಜಯಂತಿ ಸಮಾರಂಭ ಏರ್ಪಡಿಸಲಾಗಿತ್ತು.

ತ್ರಿಪದಿ ಕವಿ ಸರ್ವಜ್ಞರು ತಮ್ಮ ತತ್ವಾದರ್ಶಗಳ ಮೂಲಕ, ಸಮಾಜವನ್ನು ತಿದ್ದುವ ಕಾರ್ಯ ಮಾಡಿದ ಮಹಾನ್ ತತ್ವಜ್ಞಾನಿ. ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ ಹೇಳಿದರು.

ಗದಗ ಜಿಲ್ಲಾಡಳಿತ ಭವನದಲ್ಲಿಂದು ಜರುಗಿದ ತ್ರಿಪದಿ ಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮದಲ್ಲಿ ತ್ರಿಪದಿ ಕವಿ ಸರ್ವಜ್ಞರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

**************

೨೦೦೭-೨೦೦೮ರಲ್ಲಿ ಸಲ್ಲಿಸಲಾದ ಡಾ.ಡಿ.ಎಂ.ನಂಜುಂಡಪ್ಪ ವರದಿಯನ್ನು ಈಗಿನ ಕಾಲಕ್ಕೆ ಅನುಗುಣವಾಗಿ ಪುನರ್ ವಿಮರ್ಶೆ ಮಾಡುವುದರ ಜತೆಗೆ ಸದ್ಯದ ಮಾನವ ಅಭಿವೃದ್ಧಿ ಸೂಚ್ಯಂಕ ಆಧರಿಸಿ, ಹೊಸ ಮಾರ್ಗಸೂಚಿ ಅಥವಾ ಶಿಫಾರಸುಗಳ ಅಗತ್ಯವಿದೆ ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಅಧ್ಯಕ್ಷ ಪ್ರೊ.ಎಂ.ಗೋವಿಂದರಾವ್ ಪ್ರತಿಪಾದಿಸಿದ್ದಾರೆ.

ಬೆಳಗಾವಿ ಸುವರ್ಣ ವಿಧಾನಸೌಧದ ಕೇಂದ್ರ ಸಭಾಂಗಣದಲ್ಲಿ ಇಂದು ಜರುಗಿದ ಸಮಿತಿಯ ಸಂವಾದ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಿತಿಯು ಮಾನವ ಅಭಿವೃದ್ಧಿ ಸೂಚ್ಯಂಕಗಳನ್ನು ಪಟ್ಟಿ ಮಾಡಿಕೊಂಡಿದ್ದು, ಅವುಗಳ ಆಧಾರದ ಮೇಲೆ ವಿಸ್ತೃತವಾಗಿ ಅಧ್ಯಯನ ಕೈಗೊಂಡು, ಅಗತ್ಯ ಕ್ರಮಗಳನ್ನು ಶಿಫಾರಸ್ಸು ಮಾಡಲಿದೆ ಎಂದರು.

ರಾಜ್ಯದ ನಾಲ್ಕು ಜಿಲ್ಲೆಗಳಲ್ಲಿ ಮಾತ್ರ ತಲಾ ಆದಾಯವು ರಾಜ್ಯದ ಒಟ್ಟಾರೆ ತಲಾ ಆದಾಯಕ್ಕಿಂತ ಹೆಚ್ಚಿದೆ. ಬೆಂಗಳೂರಿನ ತಲಾ ಆದಾಯವು ಹೆಚ್ಚಿದ್ದು, ಇದರಿಂದ ರಾಜ್ಯದ ಒಟ್ಟಾರೆ ತಲಾ ಆದಾಯ ಹೆಚ್ಚಾಗಿರುತ್ತದೆ. ಆದರೆ ಉಳಿದ ಜಿಲ್ಲೆಗಳ ಕೊಡುಗೆ ನಿರೀಕ್ಷಿತ ಮಟ್ಟದಲ್ಲಿ ಇಲ್ಲ ಇಂದು ಪ್ರೊ.ಎಂ. ಗೋವಿಂದರಾವ್ ಹೇಳಿದರು.

**************

ರನ್ನ ವೈಭವ-೨೦೨೫ರ ಅಂಗವಾಗಿ ಚಿತ್ರದುರ್ಗ ನಗರಕ್ಕೆ ಆಗಮಿಸಿದ ರನ್ನ ರಥಯಾತ್ರೆಗೆ ಜಾನಪದ ಕಲಾಮೇಳಗಳೊಂದಿಗೆ ಭವ್ಯ ಸ್ವಾಗತ ಕೋರಲಾಯಿತು.

ಬಾಗಲಕೋಟೆ ಜಿಲ್ಲೆಯ ಮುಧೋಳದಲ್ಲಿ ನಡೆಯುವ ರನ್ನ ವೈಭವ-೨೦೨೫ರ ಅಂಗವಾಗಿ ರನ್ನ ರಥಯಾತ್ರೆಯು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂಚರಿಸಲಿದ್ದು, ತುಮಕೂರಿನಿಂದ ಶಿರಾ, ಹಿರಿಯೂರು ಮಾರ್ಗವಾಗಿ ಚಿತ್ರದುರ್ಗ ನಗರಕ್ಕೆ ಆಗಮಿಸಿದ ರಥಯಾತ್ರೆಯನ್ನು ಮದಕರಿ ವೃತ್ತದಲ್ಲಿ ಸ್ವಾಗತಿಸಲಾಯಿತು.

ನಂತರ ಒನಕೆ ಓಬವ್ವ ವೃತ್ತದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ರನ್ನನ ಮೂರ್ತಿಗೆ ಪುಷ್ಪನಮನ ಸಲ್ಲಿಸಿದರು.

**************

ಬಾಗಲಕೋಟೆ ಜಿಲ್ಲೆಯ ಮುಧೋಳದಲ್ಲಿ ಇದೇ ೨೨ ರಿಂದ ೨೪ ವರೆಗೆ ನಡೆಯಲಿರುವ 'ರನ್ನ ವೈಭವ'ಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದ್ದು, ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ಚಾಲನೆ ನೀಡಲಿದ್ದಾರೆ.

ಉತ್ಸವದ ಅಂಗವಾಗಿ ಇದೇ ೨೨ ರಂದು ಬೆಳಗ್ಗೆ ರನ್ನ ಬೆಳಗಲಿಯ ಬಂದಲಕ್ಷ್ಮೀ ದೇವಸ್ಥಾನದಿಂದ ಕವಿ ಚಕ್ರವರ್ತಿ ರನ್ನ ವೇದಿಕೆಯವರೆಗೆ ಸಾಗಲಿರುವ ಜಾನಪದ ಕಲಾ ತಂಡಗಳ ಮೆರವಣಿಗೆಗೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಚಾಲನೆ ನೀಡಲಿದ್ದಾರೆ.

ಮೆರವಣಿಗೆಯಲ್ಲಿ ಜನಪದ ಕೋಲಾಟ, ಡೊಳ್ಳು ಕುಣಿತ, ಶಹನಾಯಿ, ಸಂಬಾಳ, ಝಾಂಜ್ ಮೇಳ, ಪುರವಂತಿಕೆ, ವೀರಗಾಸೆ, ಪೂಜಾ ಕುಣಿತ ಸೇರಿದಂತೆ ೩೦ ವಿವಿಧ ಕಲಾತಂಡಗಳು ಭಾಗವಹಿಸಲಿವೆ.

**************

ಯಾದಗಿರಿ ನಗರಸಭೆ ವತಿಯಿಂದ ಇ-ಖಾತಾ ಆಂದೋಲನಕ್ಕೆ ಚಾಲನೆ ನೀಡಲಾಗಿದೆ. ನಗರ ವ್ಯಾಪ್ತಿಯ ಆಸ್ತಿದಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಯಾದಗಿರಿ ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ ಮನವಿ ಮಾಡಿದ್ದಾರೆ.

ಯಾದಗಿರಿ ನಗರಸಭೆ ಆವರಣದಲ್ಲಿಂದು ಇ-ಖಾತಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆಸ್ತಿದಾರರು ತಮ್ಮ ಆಸ್ತಿಗಳಿಗೆ ಕಂದಾಯ ಪಾವತಿಸಿ ಹಾಗೂ ಸೂಕ್ತ ದಾಖಲಾತಿಗಳನ್ನು ನೀಡಿ, ಇ-ಆಸ್ತಿ ನಮೂನೆ-೩ನ್ನು ಪಡೆಯಬಹುದು ಎಂದು ಮಾಹಿತಿ ನೀಡಿದರು.

**************

ಮಾರ್ಚ್ ೧ರಿಂದ ೨೦ರವರೆಗೆ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆಯನ್ನು ನಕಲು ಮುಕ್ತ ಹಾಗೂ ವ್ಯವಸ್ಥಿತವಾಗಿ ನಡೆಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಯಾದಗಿರಿ ಉಪವಿಭಾಗಾಧಿಕಾರಿ ಡಾ. ಹಂಪಣ್ಣ ಸಜ್ಜನ್ ಸೂಚಿಸಿದ್ದಾರೆ.

ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಸಂಬಂಧಿಸಿದಂತೆ ನಡೆದ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೧೯ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದ್ದು, ಈ ಪರೀಕ್ಷಾ ಕೇಂದ್ರಗಳಲ್ಲಿ ೧೦೦ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಪರೀಕ್ಷೆ ಬರೆಯಲಿದ್ದಾರೆ. ಜಿಲ್ಲೆಯಲ್ಲಿ ೧೧ ಸಾವಿರದ ೩೮೯ ವಿದ್ಯಾರ್ಥಿಗಳು ಪರೀಕ್ಷೆಗೆ ಹೆಸರು ನೋಂದಾಯಿಸಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

*******ಮುಕ್ತಾಯ******